# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 580

**ಸದಸ್ಯರ ಹೆಸರು** : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

**ಉತ್ತರಿಸುವ ದಿನಾಂಕ** : 20.02.2023

**ಉತ್ತರಿಸುವ ಸಚಿವರು** : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಮಂಜೂರಾದ ಅನುದಾನವನ್ನು ವಾಪಸ್ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರವು ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಮೂಲಕ 2019-20ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ರೂ.2.00 ಕೋಟಿಗಳನ್ನು ಮಂಜೂರು ಮಾಡಿ, ಮೊದಲನೇ ಕಂತಿನಲ್ಲಿ ರೂ.1.00 ಕೋಟಿಯನ್ನು ಜಿಲ್ಲಾಧಿಕಾರಿ ಬೀದರ್–ಜಿಲ್ಲೆ ಇವರಿಗೆ ಬಿಡುಗಡೆ ಮಾಡಿದ್ದು, ಈ ಅನುದಾನವನ್ನು ವಾಪಸ್ ಪಡೆದಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಅನುದಾನ ವಾಪಸ್ ಪಡೆದಿರುವುದಕ್ಕೆ ಕಾರಣವೇನು; (ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| ಇ) | ಸಂಘ ಸಂಸ್ಥೆಗೆ ಸಾಕಷ್ಟು ಅನುದಾನ ನೀಡುತ್ತಿರುವ ಸರ್ಕಾರ ಜಿಲ್ಲಾ ಕನ್ನಡ ಭವನ ನಿರ್ಮಾಣ ಮಾಡಲು ಸರ್ಕಾರ ಹಿಂದೇಟು ಹಾಕುತ್ತಿರುವುದೇಕೆ; ಮತ್ತು ಪ್ರಾರಂಭ ಮಾಡುವುದು ಯಾವಾಗ? (ವಿವರ ನೀಡುವುದು) | ಪ್ರಸ್ತುತ ಬೀದರ್ ಜಿಲ್ಲೆಯಲ್ಲಿ ಕನ್ನಡ ಭವನ ಕಟ್ಟಡದ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.<br>ಮುಂದುವರೆದು, 2020-21 ರಿಂದ 2022-23ನೇ ಸಾಲಿನಲ್ಲಿ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಕಡಿಮೆ ಅನುದಾನ ಹಂಚಿಕೆಯಾದ ಕಾರಣ ಸದರಿ ಕಾಮಗಾರಿಗೆ ಪ್ರಾಧಿಕಾರದಿಂದ ಬಿಡುಗಡೆ ಮಾಡಬೇಕಾಗಿರುವ ಬಾಕಿ ಉಳಿದ ರೂ.1.00 ಕೋಟಿ ಅನುದಾನವನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರನ್ನು ಕೋರಲಾಗಿರುತ್ತದೆ. ಮುಂದುವರೆದು, ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಪೂರಕ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು. |

**ಕಸಂಇವಾ 22 ಕೆಬಿಎಲ್ ಆಕ 2023**

(ವಿ.ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು